ವೈದ್ಯರಿದ್ದಾರೆ. ಈ ತಾಲ್ಲೂಕಿನ ಗ್ರಾಮಾಂತರ ಪ್ರದೇಶದಲ್ಲಿ 15 ಆಯುರ್ವೇದ ಔಷಧಾಲಯಗಳಿದ್ದು ಅವುಗಳಲ್ಲಿ 7ರಲ್ಲಿ ವೈದ್ಯರುಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ.

ಇ) ಇಲಾಖೆಯಲ್ಲಿ ಒಟ್ಟು 182 ವೈದ್ಯಾಧಿಕಾರಿಗಳ ಹುದ್ದೆಗಳು ಖಾಲಿ ಇದ್ದು ಕರ್ನಾಟಕ ಲೋಕ ಸೇವಾ ಆಯೋಗದ ಮೂಲಕ ಈ ಹುದ್ದೆಗಳನ್ನು ಭರ್ತಿ ಮಾಡಲು ಸೂಕ್ತ ಕ್ರಮ ಕೈಗೊಳ್ಳಲಾಗಿದೆ. ಕರ್ನಾಟಕ ಲೋಕಸೇವಾ ಆಯೋಗದಿಂದ ಆಯ್ಕೆ ಪಟ್ಟಿ ಬಂದ ನಂತರ ಈ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

ಈ) 1) 6 ಹಾಸಿಗೆಗಳ ಆಸ್ಪತ್ರೆಗೆ ರೂ. 30,000.00

2) 10 ಹಾಸಿಗೆಗಳ ಆಸ್ಪತ್ರೆಗೆ ರೂ. 50,000.00

3) ಪ್ರತಿ ಚಿಕಿತ್ಸಾಲಯಕ್ಕೆ ರೂ. 18,000.00

(ರೂ. 12,000.00 ದಿಂದ 18,000.00 ರೂ. ಗಳಿಗೆ ಇತ್ತೀಚೆಗೆ ಹೆಚ್ಚಿಸಲಾಗಿದೆ)

ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆ ಕುರಿತು

2711 - ಶ್ರೀ ಆರ್. ಕೃಷ್ಣಪ್ಪ (ಜಯಮಹಲ್) : ಮಾನ್ಯ ಯುವಜನ ಸೇವಾ ಹಾಗೂ ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *1994-95ನೇ ಆರ್ಥಿಕ ವರ್ಷದಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಗೆ ನೀಡಿದ ಅನುದಾನವೆಷ್ಟು?*

ಆ) *1994-95ನೇ ಸಾಲಿನಲ್ಲಿ ಪ್ರಾಥಮಿಕ ಮಾಧ್ಯಮಿಕ ಮತ್ತು ಪ್ರೌಢ ಶಾಲೆಗಳಿಂದ ನೊಂದಾಯಿಸಿದ ಸ್ಕೌಟ್ಸ್ ಗೈಡ್ಸ್‌ಗಳ ಸಂಖ್ಯೆ ಎಷ್ಟು?*

ಇ) *1995-96ನೇ ಸಾಲಿನಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಗೆ ಒದಗಿಸಲಾದ ಅನುದಾನವೆಷ್ಟು?*

ಈ) *1995-96ನೇ ಸಾಲಿನಲ್ಲಿ ಸ್ಕೌಟ್ಸ್ ಮತ್ತು ಗೈಡ್ಸ್‌ಗಾಗಿ ನೊಂದಾಯಿಸಿದವರ ಸಂಖ್ಯೆ ಎಷ್ಟು?*

ಉ) *ಸ್ಕೌಟ್ಸ್ ಮತ್ತು ಗೈಡ್ಸ್ ಚಟುವಟಿಕೆಗಳಲ್ಲಿ ಭಾಗವಹಿಸುವ ಸಂಸ್ಥೆಗಳಿಗೆ ಸರ್ಕಾರ ಪ್ರೋತ್ಸಾಹಕರ ಉತ್ತೇಜನಗಳೇನಾದರೂ ನೀಡುತ್ತಿದೆಯೇ?*

ಊ) *ಸ್ಕೌಟ್ಸ್ ಮತ್ತು ಗೈಡ್ಸ್‌ಗಾಗಿ ಸೇರಿಕೊಳ್ಳಲು ಪ್ರಾಥಮಿಕ ಮಾಧ್ಯಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಕಡ್ಡಾಯ ಮಾಡುವ ಪ್ರಸ್ತಾವನೆಗಳೇನಾದರೂ ಇದೆಯೇ?*

ಶ್ರೀ ಅಜಯಕುಮಾರ್ ಸರ್ ನಾಯಕ್ (ಯುವಜನ ಸೇವಾ ಮತ್ತು ಕ್ರೀಡಾ ಸಚಿವರು) :

ಅ) ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಗೆ 1994-95ನೇ ಸರ್ಕಾರದ ವತಿಯಿಂದ ಒಟ್ಟು ರೂ. 41,20,000-00 ಅನುದಾನವನ್ನು ನೀಡಲಾಗಿರುತ್ತದೆ.

ಆ) 1994-95ನೇ ಸಾಲಿನಲ್ಲಿ ಪ್ರಾಥಮಿಕ ಮಾಧ್ಯಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಓದುತ್ತಿರುವ ಒಟ್ಟು 1,41,128 ವಿದ್ಯಾರ್ಥಿ ವಿದ್ಯಾರ್ಥಿನಿಯರು ಸ್ಕೌಟ್ಸ್ ಮತ್ತು ಗೈಡ್ಸ್‌ಗಳಾಗಿ ನೊಂದಾಯಿಸಿರುತ್ತಾರೆ.

ಇ) 1995-96ನೇ ಸಾಲಿನಲ್ಲಿ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಸಂಸ್ಥೆಗೆ ಇಲಾಖಾ ಆಯವ್ಯಯದಲ್ಲಿ ಒಟ್ಟು ರೂ. 47,50,000-00 ಗಳನ್ನು ಒದಗಿಸಲಾಗಿರುತ್ತದೆ.

ಈ) 1995-96ನೇ ಸಾಲಿನಲ್ಲಿ ದಿನಾಂಕ 10-9-1995ರವರೆಗೆ ಭಾರತ್ ಸ್ಕೌಟ್ಸ್ ಮತ್ತು ಗೈಡ್ಸ್ ಒಟ್ಟು 30,175 ವಿದ್ಯಾರ್ಥಿಗಳನ್ನು ನೊಂದಾಯಿಸಲಾಗಿರುತ್ತದೆ.

ಉ) ಇಲ್ಲ

ಊ) ಯಾವುದೇ ಪ್ರಸ್ತಾವನೆ ಇರುವುದಿಲ್ಲ.

ಕರ್ನಾಟಕ ವೃಕ್ಷ ಸಂರಕ್ಷಣಾ ಕಾಯಿದೆಗೆ ತಿದ್ದುಪಡಿ

2710 - ಶ್ರೀ ಆರ್. ಕೃಷ್ಣಪ್ಪ (ಜಯಮಹಲ್) : ಮಾನ್ಯ ಅರಣ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಕರ್ನಾಟಕ ವೃಕ್ಷ ಸಂರಕ್ಷಣಾ ಕಾಯ್ದೆ ಪ್ರಕಾರ ಮರಕಡಿಯಲು ಅನುಮತಿ ಪಡೆದುಕೊಳ್ಳುವುದು ಕಡ್ಡಾಯವಲ್ಲವೇ?*

ಆ) *ಹಾಗಿದ್ದಲ್ಲಿ ಕರ್ನಾಟಕ ವಿದ್ಯುತ್ ಮಂಡಳಿಯವರು ಯಾವುದೇ ಮುನ್ಸೂಚನೆ ಇಲ್ಲದೇ ದೊಡ್ಡ ಮರಗಳನ್ನು ವಿದ್ಯುತ್ ಲೈನಿಗೆ ಅಡ್ಡ ಮಾಡುವ ನೆಪದಲ್ಲಿ ಕಡಿದು ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಇ) *ಹಾಗಿದ್ದಲ್ಲಿ ಇದನ್ನು ತಪ್ಪಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?*

ಈ) *ಈ ಮರ ಕಡಿಯಲು ಬರತಕ್ಕ ಅರ್ಜಿಗಳನ್ನು ನಿಗದಿತ ಕಾಲದಲ್ಲಿ ವಿಲೇವಾರಿ ಮಾಡದಿದ್ದಲ್ಲಿ ಅನುಮತಿ ನೀಡಲಾಗಿದೆ ಎಂದು ಸೂಚಿಸುವ ಬಗ್ಗೆ ಈ ಕಾಯಿದೆಗೆ ತಿದ್ದುಪಡಿ ತರಲು ಸರ್ಕಾರ ಉದ್ದೇಶಿಸಿದೆಯೇ?*

ಶ್ರೀ ಹೆಚ್.ವೈ. ಮೇಟಿ (ಅರಣ್ಯ ಸಚಿವರು) :

ಅ) ಹೌದು

ಆ) ಕರ್ನಾಟಕ ವಿದ್ಯುತ್ ಮಂಡಳಿ ವಿಶೇಷ ಕಾಯಿದೆಯನ್ವಯ ಮರಗಳ ಕೊಂಬೆಗಳನ್ನು ವಿದ್ಯುಚ್ಛಕ್ತಿ ಲೈನಿಗೆ ಅಡ್ಡ ಬಂದಲ್ಲಿ ಕಡಿಯಲು ಅನುಮತಿ ಇದೆ. ವಿನಾಕಾರಣ ಮರಗಳನ್ನು ಕಡಿಯದಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲು ಕ್ರಮವನ್ನು ಕೈಗೊಳ್ಳಲಾಗುವುದು.

ಇ) ವಿನಾಕಾರಣ ಮರದ ಕೊಂಬೆಗಳನ್ನು ಕಡಿಯುವ ನೆಪದಲ್ಲಿ ಮರಗಳನ್ನು ಕರ್ನಾಟಕ ವಿದ್ಯುತ್ ಮಂಡಳಿಯವರು ಕಡಿದಿರುವ ಬಗ್ಗೆ ಅರಣ್ಯ ಇಲಾಖೆ ಹಾಗೂ ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿಯವರು ಜಂಟಿ ಸಮಾಲೋಚನೆ ನಡೆಸಿ ಇಂತಹ ಸಂದರ್ಭಗಳಲ್ಲಿ ಮರಗಳ ಕೊಂಬೆಗಳನ್ನು ಕಡಿಯುವುದು ಅರಣ್ಯ ಇಲಾಖೆಗೆ ವಹಿಸಿ ಅದಕ್ಕೆ ಅವಶ್ಯಕವಾದ ಸಲಕರಣೆಗಳನ್ನು ಕರ್ನಾಟಕ ವಿದ್ಯುಚ್ಛಕ್ತಿ ಮಂಡಳಿ ಒದಗಿಸಬೇಕೆಂದು ತೀರ್ಮಾನ ತೆಗೆದುಕೊಳ್ಳಲಾಗಿದೆ.

ಈ) ಸಾಮಾನ್ಯವಾಗಿ ನಿಗದಿತ ಕಾಲದೊಳಗೆ ಅರ್ಜಿಗಳನ್ನು ವಿಲೇವಾರಿ ಮಾಡಲಾಗುತ್ತಿದೆ. ಆದರೂ ಕೆಲವೊಂದು ಪ್ರಕರಣಗಳಲ್ಲಿ ಇದೇ ವೃಕ್ಷ ಸಂರಕ್ಷಣಾ ಕಾಯ್ದೆಯ ಸೂಚನೆಗಳನ್ವಯ ಕಡಿಯಲಿರುವ ಮರಗಳ ಅಳತೆ ಜಮೀನಿನ ಸರ್ವೆ ನಂಬರ್, ಸರ್ವೆ ನಕ್ಷೆ, ವಗೈರೆ ನೀಡದೇ ಇವುಗಳನ್ನು ತನಿಖೆ ಮಾಡಿ ನಿಗದಿತ ಅವಧಿಯೊಳಗೆ ವಿಲೇವಾರಿ ಮಾಡದಿದ್ದಲ್ಲಿ ಅನುಮತಿ ನೀಡಲಾಗಿದೆ ಎಂದು ಭಾವಿಸುವ ಅವಕಾಶವಿರುವುದರಿಂದ ಈ ಕಾಯ್ದೆಗೆ ತಿದ್ದುಪಡಿ ತರಲು ಪರಿಶೀಲಿಸಲಾಗುತ್ತದೆ.

ದ.ಕನ್ನಡ ಜಿಲ್ಲೆಯ ಶಿಕ್ಷಕರ ತರಬೇತಿ ಸಂಸ್ಥೆ

2029 - ಶ್ರೀ ಕುಂಬಳೆ ಸುಂದರರಾವ್ (ಸುರತ್ಕಲ್) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಲ್ಪ ಸಂಖ್ಯಾತರು ನಡೆಸುತ್ತಿರುವ ಶಿಕ್ಷಕ ತರಬೇತಿ ಸಂಸ್ಥೆಗಳೆಷ್ಟು?*